ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

# ನಗರ ವಿವಿಯಲ್ಲಿ ಪ್ರಸಾರಾಂಗ ಉದ್ಘಾಟನೆ

ವಿಜಯವಾಣಿ ಚಿತ್ರ



ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿವಿಯಲ್ಲಿ ಏರ್ಪಡಿಸಿದ್ದ 'ವಿಶ್ವಮಾನವ ದಿನ' ಕಾರ್ಯಕ್ರಮದಲ್ಲಿ ಕುವೆಂಪು ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಪ್ರೊ. ಹಿ.ಚಿ. ಬೋರಲಿಂಗಯ್ಯ, ಉಮಾಶ್ರೀ, ಪ್ರೊ. ಜಿ. ಪ್ರಶಾಂತ ನಾಯಕ ಮತ್ತಿತರರು ಉಪಸ್ಥಿತರಿದ್ದರು.

**ಬೆಂಗಳೂರು:** ಡಾ. ಮನಮೋಹನ್‌ಸಿಂಗ್ ಬೆಂಗಳೂರು ನಗರ ವಿವಿ ವತಿಯಿಂದ ಸೋಮವಾರ ಜ್ಞಾನಜ್ಯೋತಿ ಸಭಾಂಗಣದಲ್ಲಿ ವಿಶ್ವಮಾನವ ದಿನವನ್ನು ಆಚರಿಸಲಾಯಿತು. ಈ ವೇಳೆ ಪ್ರಸಾರಾಂಗ ವಿಭಾಗವನ್ನು ಉದ್ಘಾಟಿಸಲಾಯಿತು.

ಜಾನಪದ ಪರಿಷತ್ತಿನ ಅಧ್ಯಕ್ಷ ಪ್ರೊ. ಹಿ.ಚಿ. ಬೋರಲಿಂಗಯ್ಯ ಮಾತನಾಡಿ, ಮೂಢನಂಬಿಕೆಗಳ ವಿರುದ್ಧ ಹೋರಾಟ, ವೈಚಾರಿಕ ನೆಲೆಗಟ್ಟಿನಲ್ಲಿ ಚಿಂತನೆ, ಪ್ರಕೃತಿಯಲ್ಲಿ ದೇವರನ್ನು ಕಾಣುವ ಮೂಲಕ ಕುವೆಂಪು ದಾರ್ಶನಿಕರಾಗಿದ್ದರು. ಮೈಸೂರು ವಿವಿ ಕುಲಪತಿಯಾಗಿದ್ದಾಗ ಬೋಧನಾಂಗ, ಸಂಶೋಧನಾಂಗ ಮತ್ತು ಪ್ರಸಾರಾಂಗವನ್ನು ಆರಂಭಿಸಿದ್ದರು ಎಂದು ಸ್ಮರಿಸಿದರು.

ಮಾಜಿ ಸಚಿವೆ ಉಮಾಶ್ರೀ, ಹಿರಿಯ ಪ್ರಾಧ್ಯಾಪಕ ಪ್ರೊ. ಜಿ. ಪ್ರಶಾಂತ ನಾಯಕ, ರಂಗ ನಿರ್ದೇಶಕ ಸಿ. ಬಸವಲಿಂಗಯ್ಯ, ವಿವಿ ವಿತ್ತಾಧಿಕಾರಿ ಎಂ.ವಿ. ವಿಜಯಲಕ್ಷ್ಮೀ, ಸಿಂಡಿಕೇಟ್ ಸದಸ್ಯ ಬಿ.ಆರ್. ಸುಪ್ರೀತ್ ಇದ್ದರು.

# ನಗರದಾದ್ಯಂತ ರಾಷ್ಟ್ರಕವಿ ಕುವೆಂಪು ಸ್ಮರಣೆ

## ಸಂಘ ಸಂಸ್ಥೆಗಳಿಂದ ವಿಶೇಷ ಕಾರ್ಯಕ್ರಮ | ಕವಿ ಭಾವಚಿತ್ರಕ್ಕೆ ಪುಷ್ಪನಮನ

**ಸಂ.ಕ. ಸಮಾಚಾರ, ಬೆಂಗಳೂರು**

ರಾಷ್ಟ್ರಕವಿ ಕುವೆಂಪು ಅವರ 121ನೇ ಜನ್ಮದಿನವನ್ನು ಬೆಂಗಳೂರಿನಲ್ಲಿ ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು. ಸಂಘ ಸಂಸ್ಥೆಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಶ್ವವಿದ್ಯಾಲಯಗಳು ಕುವೆಂಪು ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಕವೆಂಪು ಸ್ಮರಣೆ ಮಾಡಲಾಯಿತು.



ಪ್ರತಿ ವರ್ಷದಂತೆ ಈ ವರ್ಷವೂ ನಗರದಲ್ಲಿ ವಿವಿಧ ಸಾಹಿತ್ಯ ಕಾರ್ಯಕ್ರಮಗಳು, ಉಪನ್ಯಾಸಗಳು, ಮಹಾಕಾವ್ಯ ಶ್ರೀರಾಮಾಯಣ ದರ್ಶನಂ ಕುರಿತು ವಿಚಾರ ಸಂಕಿರಣ, ಕವಿಗೋಷ್ಠಿ, ಸಾಂಸ್ಕೃತಿಕ ಕಾರ್ಯಕ್ರಮಗಳು, ಕುವೆಂಪು ರಾಷ್ಟ್ರೀಯ ಪುರಸ್ಕಾರ ಪ್ರದಾನ ಸಮಾರಂಭ ಹಾಗೂ ಅವರ ಕೃತಿಗಳ ಪರಿಚಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಕುವೆಂಪು ಅವರ ವೈಚಾರಿಕತೆ, ವೈಜ್ಞಾನಿಕ ಮನೋಭಾವ ಮತ್ತು ಮೌಢ್ಯರಹಿತ ಆಧ್ಯಾತ್ಮಿಕ ಸಮಾಜ ನಿರ್ಮಾಣದ ಆಶಯಗಳನ್ನು ಪ್ರೇಕ್ಷಕರಿಗೆ ತಲುಪಿಸುವ ಉದ್ದೇಶದಿಂದ ಕುವೆಂಪು ಅವರ ಜಲಗಾರ, ಬೊಮ್ಮನಹಳ್ಳಿ ಕಿಂದರಿಜೋಗಿ ನಾಟಕಗಳು ನಗರದ ವಿವಿಧ ಭಾಗದಲ್ಲಿ ಪ್ರದರ್ಶನಗೊಂಡವು. ಕನ್ನಡ ಜನಶಕ್ತಿ ಸಂಘದ ವತಿಯಿಂದ ನಗರದ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಮಹಾಕವಿ ಕುವೆಂಪು ಜಯಂತ್ಯುತ್ಸವದಲ್ಲಿ ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ಕೆ.ವಿ.ನಾಗರಾಜಮೂರ್ತಿ ಪಾಲ್ಗೊಂಡಿದ್ದರು. ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದಲ್ಲಿ ಕನ್ನಡ ಸಂಘದ ವತಿಯಿಂದ ರಾಷ್ಟ್ರಕವಿ ಕುವೆಂಪು ಅವರ ಸ್ಮರಣೆ ಮಾಡಲಾಯಿತು. ಈ ವೇಳೆ ಕುಲಪತಿ ಡಾ. ಎಸ್.ವಿ.ಸುರೇಶ್, ಡಾ.ಸುಭಾಚ್ ರಾಜಮಾನೆ, ಡಾ.ಕೆ.ಪಿ. ರಘುಪ್ರಸಾದ್ ಇದ್ದರು.

**ಪುಸ್ತಕ ಬಿಡುಗಡೆ:** ಬೆಂಗಳೂರು ನಗರ ವಿವಿ ವತಿಯಿಂದ ಏರ್ಪಡಿಸಲಾಗಿದ್ದ ವಿಶ್ವಮಾನವ ದಿನಾಚರಣೆಯಲ್ಲಿಪ್ರೊ.ಪ್ರಶಾಂತ ನಾಯಕ್ ಅವರ ನಮ್ಮ ಕುವೆಂಪು ಮತ್ತು ಪ್ರೊ. ತಾಂಡವಗೌಡರವರ ಕೃತಕ ಬುದ್ಧಿಮತ್ತೆಯ ಮೂಲಕ ಬೋಧನಾ ಕೌಶಲ್ಯ ಅಭಿವೃದ್ಧಿ ಕೃತಿಗಳನ್ನು ಬಿಡುಗಡೆ ಮಾಡಲಾಯಿತು. ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿದ್ಯಾರ್ಥಿಗಳು ರಂಗಾಯಣ ಮಾಜಿ ನಿರ್ದೇಶಕ ಸಿ. ಬಸವಲಿಂಗಯ್ಯ ನಿರ್ದೇಶನದಲ್ಲಿ ಕುವೆಂಪು ವಿರಚಿತ ಶೂದ್ರ ತಪಸ್ವಿ ನಾಟಕವನ್ನು ಅಭಿನಯಿಸಿ ಪ್ರೇಕ್ಷಕರ ಅಪಾರ ಮೆಚ್ಚುಗೆಗೆ ಪಾತ್ರರಾದರು. ಈ ವೇಳೆ ಕರ್ನಾಟಕ ಜಾನಪದ ಪರಿಷತ್‌ನ ಅಧ್ಯಕ್ಷ ಪ್ರೊ. ಹಿ.ಚಿ. ಬೋರಲಿಂಗಯ್ಯ, ಮಾಜಿ ಸಚಿವೆ ಡಾ.ಉಮಾಶ್ರೀ, ಕುವೆಂಪು ವಿವಿಯ ಹಿರಿಯ ಪ್ರಾಧ್ಯಾಪಕ ಪ್ರೊ. ಪ್ರಶಾಂತ ನಾಯಕ್, ವಿವಿ ಕುಲಪತಿ ಪ್ರೊ.ರಮೇಶ್.ಬಿ ಇದ್ದರು.

**ಎಚ್‌ಎಎಲ್‌ನಲ್ಲಿ ಕುವೆಂಪು ಜಯಂತಿ:** ಎಚ್‌ಎಎಲ್‌ನಲ್ಲಿ ರಾಷ್ಟ್ರಕವಿ ಕುವೆಂಪು ಸಂಘದಿಂದ ಏರ್ಪಡಿಸಿದ್ದ ಕುವೆಂಪು ಜಯಂತಿ ಸಮಾರಂಭವನ್ನು ಕನ್ನಡ ಪ್ರಾಧ್ಯಾಪಕ ಡಾ.ಎಸ್.ರಾಮಲಿಂಗೇಶ್ವರ್ ಉದ್ಘಾಟಿಸಿ ವಿಶೇಷ ಉಪನ್ಯಾಸ ನೀಡಿದರು. ಈ ವೇಳೆ ಕುವೆಂಪು ಸಂಘದ ಅಧ್ಯಕ್ಷ ಬೋರಲಿಂಗಪ್ಪ, ಸಂಘದ ಕಾರ್ಯಾಧ್ಯಕ್ಷ ವಿ.ರೆಡ್ಡಿ, ಎಐಸಿಸಿಯ ರಮೇಶ್, ಎಚ್‌ಎಎಲ್ ಕಾರ್ಮಿಕ ಸಂಘದ ಟಿ.ಎನ್.ನರಸಿಂಹಮೂರ್ತಿ, ಎಚ್‌ಎಎಲ್‌ನ ವಿವಿಧ ಸಂಘಸಂಸ್ಥೆಗಳ ಪದಾಧಿಕಾರಿಗಳಾದ ಸುರೇಶ್, ಗೌಡಯ್ಯ, ಬಿಂದು ಹಾಜರಿದ್ದರು.

CMYK

# ‘ಸಮ ಸಮಾಜ ನಿರ್ಮಾಣವಾಗಲಿ’

## ಜಾನಪದ ಪರಿಷತ್ತಿನ ಅಧ್ಯಕ್ಷ ಹಿ.ಚಿ. ಬೋರಲಿಂಗಯ್ಯ



ವಿಶ್ವಮಾನವ ದಿನಾಚರಣೆ ಸಮಾರಂಭದಲ್ಲಿ ಕುವೆಂಪು ಅವರ ಭಾವಚಿತ್ರಕ್ಕೆ ಹಿ.ಚಿ. ಬೋರಲಿಂಗಯ್ಯ, ಉಮಾಶ್ರೀ, ಬಿ. ರಮೇಶ್, ಪರೀಕ್ಷಾಂಗ ಕುಲಸಚಿವ ರಮೇಶ್ ಬಿ. ಕುಡೇನಟ್ಟಿ ಮತ್ತು ಕುವೆಂಪು ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರಶಾಂತ ನಾಯಕ್ ಪುಷ್ಪನಮನ ಸಲ್ಲಿಸಿದರು

ಪ್ರಜಾವಾಣಿ ವಾರ್ತೆ 30/12/2025

ಬೆಂಗಳೂರು: ‘ಯುವ ಸಮೂಹ ರಾಷ್ಟ್ರಕವಿ ಕುವೆಂಪು ಅವರ ವಿಶ್ವಮಾನವ ಸಂದೇಶವನ್ನು ಎತ್ತಿಹಿಡಿಯುವ ಮೂಲಕ ಸಮ ಸಮಾಜ ನಿರ್ಮಾಣಕ್ಕೆ ಭದ್ರ ಬುನಾದಿ ಹಾಕಬೇಕು’ ಎಂದು ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷ ಹಿ.ಚಿ. ಬೋರಲಿಂಗಯ್ಯ ಹೇಳಿದರು.

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದಲ್ಲಿ ಸೋಮವಾರ ನಡೆದ ವಿಶ್ವಮಾನವ ದಿನಾಚರಣೆ ಮತ್ತು ಪ್ರಸಾರಾಂಗ ಉದ್ಘಾಟನೆ ಸಮಾರಂಭದಲ್ಲಿ ಅವರು ಮಾತನಾಡಿದರು. ‘ಕುವೆಂಪು ಅವರ ಪೂರ್ಣದೃಷ್ಟಿ ಕನ್ನಡ ಸಾಹಿತ್ಯದಲ್ಲಿ ನವ ಮನ್ವಂತರಕ್ಕೆ ನಾಂದಿಯಾಯಿತು’ ಎಂದರು.

‘ಮೈಸೂರು ವಿಶ್ವವಿದ್ಯಾಲಯದ ಕುಲಪತಿಗಳಾಗಿದ್ದ ಕುವೆಂಪು ಅವರು, ಅಧ್ಯಯನಾಂಗ, ಸಂಶೋಧನಾಂಗ ಮತ್ತು ಪ್ರಸಾರಾಂಗ ಎಂಬ ಮೂರು ಆಯಾಮಗಳ ಮೂಲಕ ಉನ್ನತ ಶಿಕ್ಷಣಕ್ಕೆ ಪರಿಪೂರ್ಣತೆಯ ಮಾರ್ಗ ತೋರಿದ್ದರು. ಪ್ರಕೃತಿ ಆರಾಧಕರಾಗಿದ್ದ ಅವರು, ಕಂದಾಚಾರ, ಮೂಢನಂಬಿಕೆ, ವರ್ಣ ವ್ಯವಸ್ಥೆಯ ವಿರುದ್ಧ ಬರವಣಿಗೆ ಮೂಲಕವೇ ಸಮರ ಸಾರಿ ಮನುಜಮತ ವಿಶ್ವಪಥದ ಸಂದೇಶವನ್ನು ಸಾರಿದರು’ ಎಂದು ಹೇಳಿದರು.

ಪ್ರಶಾಂತ ನಾಯಕ್ ಅವರ ‘ನಮ್ಮ ಕುವೆಂಪು’ ಮತ್ತು ತಾಂಡವಗೌಡ ಅವರ ‘ಕೃತಕ ಬುದ್ಧಿಮತ್ತೆಯ ಮೂಲಕ ಬೋಧನಾ ಕೌಶಲ ಅಭಿವೃದ್ಧಿ’ ಎಂಬ ಪುಸ್ತಕಗಳನ್ನು ಜನಾರ್ಪಣೆಗೊಳಿಸಲಾಯಿತು.




SINGH
UNIVERSITY



ಕನ್ನಡ ಅಧ್ಯಯನ ವಿಭಾಗ - ಪ್ರಸಾರಾಂಗ
'ವಿಶ್ವಮಾನವ ದಿನಾಚರಣೆ
ಹಾಗೂ




ಡಾ. ಮನಮೋಹನ್ ಸಿಂಗ್
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
DR. MANMOHAN SINGH
BENGALURU CITY UNIVERSITY
ಕನ್ನಡ ಅಧ್ಯಯನ
ಪ್ರಸಾರಾಂಗ




























